ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

(13)

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 25/2/21

# ಸಮಸ್ಯೆಗಳ ಪರಿಹಾರಕ್ಕೆ ಕ್ರಮ

ಸಂ.ಕ ಸಮಾಚಾರ ಬೆಂಗಳೂರು 25/2/21

ರಾಜ್ಯ ಸರ್ಕಾರವು ಅರಣ್ಯ ಅಧಿಕಾರಿಗಳೊಂದಿಗೆ ಚರ್ಚಿಸಿ ಅರಣ್ಯ ಇಲಾಖೆಯ ಸಮಸ್ಯೆಗಳ ಪರಿಹಾರಕ್ಕೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಭರವಸೆ ನೀಡಿದರು.

ಅರಣ್ಯ ಇಲಾಖೆ ವತಿಯಿಂದ ಅರಣ್ಯ ಭವನದಲ್ಲಿ ಬುಧವಾರ ಏರ್ಪಡಿಸಿದ್ದ ಹಿರಿಯ ಅರಣ್ಯ ಅಧಿಕಾರಿಗಳ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿ, ಅರಣ್ಯ ಇಲಾಖೆಯಲ್ಲಿನ ನ್ಯೂನತೆಗಳನ್ನು ಪರಿಹರಿಸಲಾಗುವುದು. ಅರಣ್ಯ ಅಭಿವೃದ್ಧಿಗೆ ಬೇಕಾದ ಅನುದಾನವನ್ನು ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗುವುದು. ಕರ್ನಾಟಕದಲ್ಲಿ ಮತ್ತಷ್ಟು ಹಸಿರು ಪ್ರದೇಶವನ್ನು ಹೆಚ್ಚಿಸಲು ಈಗಿರುವ ಶೇ.22 ರಷ್ಟು ಅರಣ್ಯ ಪ್ರದೇಶವನ್ನು ಶೇ.33ಕ್ಕೆ ಹೆಚ್ಚಿಸಲು ಇಲಾಖೆಯ ಅಧಿಕಾರಿಗಳು ಅರಣ್ಯದಲ್ಲಿನ ಆದಿವಾಸಿಗಳು ಮತ್ತು ಸ್ಥಳೀಯ ರೈತರ ನೆರವು ಪಡೆಯಬೇಕು ಎಂದು ಸಲಹೆ ನೀಡಿದರು.

ಅರಣ್ಯ ಅಧಿಕಾರಿಗಳು ಅರಣ್ಯ ಇಲಾಖೆಯ ಪ್ರಗತಿ ಕುರಿತು ವರದಿ ಮಂಡಿಸಿದರು. ಅರಣ್ಯ ಅಧಿಕಾರಿಗಳ ಜೊತೆ ಅರಣ್ಯ ಸಚಿವ ಅರವಿಂದ ಲಿಂಬಾವಳಿ ಚರ್ಚಿಸಿದರು. ಕರ್ನಾಟಕ ಜೀವ ವೈವಿಧ್ಯ ಮಂಡಳಿ ಅಧ್ಯಕ್ಷ ಅನಂತ ಹೆಗಡೆ ಅಶಿಸರ, ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಸಂದೀಪ್ ದವೆ, ಅರಣ್ಯ ಪಡೆ ಮುಖ್ಯಸ್ಥ ಸಂಜಯ್ ಮೋಹನ್, ಜೀವಿಶಾಸ್ತ್ರ ಇಲಾಖೆ ಮುಖ್ಯಸ್ಥ ವಿಜಯ್ ಕುಮಾರ್ ಗೋಗಿ ಉಪಸ್ಥಿತರಿದ್ದರು.



ಅರಣ್ಯ ಭವನದಲ್ಲಿ ಹಿರಿಯ ಅಧಿಕಾರಿಗಳ ಕಾರ್ಯಾಗಾರವನ್ನು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಉದ್ಘಾಟಿಸಿದರು.